# ಸಂತ ಜೋಸೆಫ್ ಕಾಲೇಜು ಈಗ ವಿವಿ

## ಪ್ರಸಕ್ತ ಶೈಕ್ಷಣಿಕ ವರ್ಷದಿಂದಲೇ ವಿಶ್ವವಿದ್ಯಾಲಯವಾಗಿ ಕಾರ್ಯಾರಂಭ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ಸಂತ ಜೋಸೆಫರ ಕಾಲೇಜು ಪ್ರಸಕ್ತ ಶೈಕ್ಷಣಿಕ ವರ್ಷದಿಂದ ವಿಶ್ವವಿದ್ಯಾಲಯವಾಗಿ ಉನ್ನತೀಕರಣಗೊಂಡಿದ್ದು, ವಿವಿಧ ಶೈಕ್ಷಣಿಕ ಚಟುವಟಿಕೆಗಳ ವಿಸ್ತರಣೆಗೆ ಆಡಳಿತ ಮಂಡಳಿ ಮುಂದಾಗಿದೆ.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಂಸ್ಥೆಯ ಮುಖ್ಯಸ್ಥ ಫಾದರ್ ಸ್ವಿಬರ್ಟ್ ಡಿ ಸಿಲ್ವಾ, 140 ವರ್ಷಗಳ ಇತಿಹಾಸ ಹೊಂದಿರುವ ಸಂತ ಜೋಸೆಫರ ಕಾಲೇಜನ್ನು ವಿವಿ ಆಗಿ ಉನ್ನತೀಕರಿಸುವ ಸಂಬಂಧ ರಾಜ್ಯ ಸರ್ಕಾರ ವಿಧೇಯಕ ಜಾರಿಗೊಳಿಸಿ, ಜುಲೈ 2ರಂದು ವಿಶ್ವವಿದ್ಯಾಲಯ ಸ್ಥಾನಮಾನ ನೀಡಿದೆ. ಇನ್ನು ಮುಂದೆ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ರಾಜ್ಯದ ಇತರೆ ವಿಶ್ವವಿದ್ಯಾಲಯಗಳಿಗೆ ಮಾದರಿಯಾಗುವಂತೆ ಕಾರ್ಯನಿರ್ವಹಿಸಲಿದೆ ಎಂದರು.

ಪ್ರಸಕ್ತ ಸಾಲಿನ ಎಲ್ಲ ಶೈಕ್ಷಣಿಕ ಚಟುವಟಿಕೆಗಳು ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿಯೇ ನಡೆಯಲಿವೆ. ಕಾಲೇಜು ವಿಶ್ವವಿದ್ಯಾಲಯವಾಗಿ ಉನ್ನತೀಕರಣಗೊಂಡ ಹಿನ್ನೆಲೆಯಲ್ಲಿ ಶೀಘ್ರದಲ್ಲಿಯೇ ದೊಡ್ಡ ಮಟ್ಟದ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ಮಾಹಿತಿ ನೀಡಿದರು.



ಸುದ್ದಿಗೋಷ್ಠಿಯಲ್ಲಿ ಕಾಲೇಜು ಮುಖ್ಯಸ್ಥ ಫಾದರ್ ಸ್ವಿಬರ್ಟ್ ಡಿ ಸಿಲ್ವಾ ಮಾತನಾಡಿದರು.

ಪ್ರಾಂಶುಪಾಲರಾದ ಫಾದರ್ ವಿಕ್ಟರ್ ಲೋಬೊ ಮಾತನಾಡಿ, ಸಮಾಜದ ದುರ್ಬಲ, ಬಡ ವರ್ಗದವರಿಗೆ ಉನ್ನತ ಶಿಕ್ಷಣ ನೀಡಿ ಮುಖ್ಯವಾಹಿನಿಗೆ ತರುವುದು ಶೈಕ್ಷಣಿಕ ಸಂಸ್ಥೆಯ ಮುಖ್ಯ ಉದ್ದೇಶವಾಗಿದೆ. ಸದ್ಯ ಸಂಸ್ಥೆಯಲ್ಲಿ 8200 ವಿದ್ಯಾರ್ಥಿಗಳು ಪದವಿ, ಸ್ನಾತಕ ಪದವಿ, ಪಿಎಚ್‌ಡಿ ಶಿಕ್ಷಣ ಪಡೆಯುತ್ತಿದ್ದಾರೆ. ಬನ್ನೇರುಘಟ್ಟ ರಸ್ತೆಯ ಕಾಳೇನ ಅಗ್ರಹಾರದಲ್ಲಿ ನೂತನ ಕಟ್ಟಡ ನಿರ್ಮಿಸಲಾಗುತ್ತಿದ್ದು, ಕೆಲ ವರ್ಷಗಳಲ್ಲಿಯೇ ಕ್ಯಾಂಪಸ್ ವಿಸ್ತರಣೆ ಮಾಡಲಾಗುವುದು. 15 ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳಿಗೆ ಶಿಕ್ಷಣ ಪಡೆಯಲು ಅವಕಾಶ ಮಾಡಿಕೊಡಲು ಯೋಜನೆ ರೂಪಿಸಲಾಗಿದೆ. ಪ್ರಸಕ್ತ ವರ್ಷದಿಂದ ಸಂಜೆ ಕಾಲೇಜು ಆರಂಭಿಸಲಾಗುವುದು, ಬಡ ವಿದ್ಯಾರ್ಥಿಗಳಿಗೆ ವಿಶೇಷ ಯೋಜನೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಕಳೆದ ವರ್ಷ ಒಂದೂವರೆ ಕೋಟಿ ರು. ವಿದ್ಯಾರ್ಥಿ ವೇತನ ನೀಡಲಾಗಿದೆ. ಕೊರೋನಾ ವೇಳೆ ಸಾಮಾಜಿಕ ಸಂಸ್ಥೆಯಿಂದ ಕಾರ್ಯ ಮಾಡಲಾಗಿದೆ ಎಂದರು.